ಕರ್ನಾಟಕ ಸರ್ಕಾರ

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ

ಆನಂದರಾವ್ ವೃತ್ತ, ಬೆಂಗಳೂರು.-09

**ಸಂಖ್ಯೆ: ಆಕುಕನಿ/ಆಪ್ತ/35/2020-21** **ದಿನಾಂಕ: 21/04/2020**

## ಸುತ್ತೋಲೆ

**ವಿಷಯ: ಗರ್ಭಿಣಿ ಅರೆ ವೈದ್ಯಕೀಯ ಸಿಬ್ಬಂದಿಗಳಿಗೆ ಕೋವಿಡ್-19 ರ ಕರ್ತವ್ಯದಿಂದ ವಿನಾಯಿತಿ ನೀಡುವ ಬಗ್ಗೆ.**
**ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 123 ಡಿಬಿಎಂ 2020, ದಿನಾಂಕ: 23/03/2020.**

****

ರಾಜ್ಯದಾದ್ಯಂತ ಕೋವಿಡ್-19 ರ ಚಿಕಿತ್ಸೆಗಾಗಿ ಗುರುತಿಸಲ್ಪಟ್ಟಿರುವ ಆಸ್ಪತ್ರೆಗಳಲ್ಲಿ ಕೊರೊನಾ ಶಂಕಿತರು/ಸೋಂಕಿತರ ಚಿಕಿತ್ಸೆಗಾಗಿ ಹಾಗೂ ಸಾಂಕ್ರಾಮಿಕವನ್ನು ನಿಯಂತ್ರಣದಲ್ಲಿರಿಸಲು ಸಹಾಯಕವಾಗುವಂತೆ ಸಮುದಾಯದ ಮಟ್ಟದಲ್ಲಿನ ಜನಸಾಮಾನ್ಯರ ಸಮಾಲೋಚನೆಗಾಗಿ, ವೈದ್ಯಕೀಯ ಮತ್ತು ಅರೆ ವೈದ್ಯಕೀಯ ವರ್ಗದವರು, ಗ್ರೂಪ್ 'ಡಿ' ನೌಕರು ಹಾಗೂ ಆಶಾ ಕಾರ್ಯಕರ್ತೆಯರನ್ನು ನಿಯೋಜಿಸಿರುವುದು ಸರಿಯಷ್ಟೆ.

ಇವರಲ್ಲಿ ಗರ್ಭಿಣಿಯರು ಹಾಗೂ ಒಂದು ವರ್ಷ ತುಂಬದ ಮಗುವಿನ ತಾಯಂದಿರು ಇದ್ದಲ್ಲಿ, ಇವರ ಆರೋಗ್ಯದ ದೃಷ್ಟಿಯಿಂದ ಇವರಿಗೆ ಕೋವಿಡ್-19 ರ ಕರ್ತವ್ಯದಿಂದ ವಿನಾಯಿತಿ ನೀಡಿ, ಆರೋಗ್ಯ ಸಂಸ್ಥೆಗಳಲ್ಲಿನ ಇತರೆ ಕಾರ್ಯಗಳಿಗೆ ನಿಯೋಜಿಸಲು ಸೂಚಿಸಿದೆ.

ನಿರ್ದೇಶಕರು
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**
**ಬೆಂಗಳೂರು**

**ಗೆ:**

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು.
3. ವೈದ್ಯಕೀಯ ಅಧೀಕ್ಷಕರು, ಸಾರ್ವಜನಿಕ ಆಸ್ಪತ್ರೆ, . . . . . . . . .

**ಪ್ರತಿಯನ್ನು ಮಾಹಿತಿಗಾಗಿ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.